ಶಿಶುಪಾಲನಾ ಭತ್ಯೆ

File No.WCDSEC/208/PHP/2020-WCD_SEC_C-WOMEN AND CHILD WELFARE SEC

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2020-21ನೇ ಸಾಲಿನಲ್ಲಿ ಘೋಷಣೆಯಾಗಿರುವ ಅಂಧ ತಾಯಂದಿರಿಗೆ ನೀಡಲಾಗುತ್ತಿರುವ ಮಾಸಿಕ ರೂ.2000/-ಗಳ ಶಿಶುಪಾಲನಾ ಭತ್ಯೆಯನ್ನು ಮಗುವಿನ ಮೊದಲ ಐದು ವರ್ಷದವರೆಗೆ ವಿತರಿಸುವ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿ ನೀಡುವ ಬಗ್ಗೆ.

**ಓದಲಾಗಿದೆ:** ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯದ ಪತ್ರ ಸಂಖ್ಯೆ: ವಿಹಿನಿ/ಆವ್ಯಯೋ/ ಸಿ.10/58/2020-21/936, ದಿ:04.09.2020

**ಪ್ರಸ್ತಾವನೆ:**

2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-134ರಲ್ಲಿ "ಅಂಧ ತಾಯಂದಿರಿಗೆ ಮಾಸಿಕ 2000 ರೂ.ಗಳಂತೆ ಶಿಶುಪಾಲನಾ ಭತ್ಯೆಯನ್ನು ರಾಜ್ಯ ಸರ್ಕಾರವು ಮಗುವಿನ ಮೊದಲ ಎರಡು ವರ್ಷದವರೆಗೆ ನೀಡುತ್ತಿದೆ. ಈ ಭತ್ಯೆಯನ್ನು ಮಕ್ಕಳ ಮೊದಲ ಐದು ವರ್ಷದವರೆಗೆ ನೀಡಲಾಗುವುದೆಂದು" ಮಾನ್ಯ ಮುಖ್ಯಮಂತ್ರಿಯವರು ಘೋಷಿಸಿರುವಂತೆ ಈ ಭತ್ಯೆಯನ್ನು ಮಕ್ಕಳ ಮೊದಲ ಐದು ವರ್ಷದವರೆಗೆ ನೀಡಲು 2020-21ನೇ ಸಾಲಿನ ಲೆಕ್ಕ ಶೀರ್ಷಿಕೆ 2235-02-101-0-99ರಡಿಯಲ್ಲಿ ಒದಗಿಸಿರುವ ಆಯವ್ಯಯದಲ್ಲಿ ಭರಿಸಲು ಆಡಳಿತಾತ್ಮಕ ಮಂಜೂರಾತಿ ನೀಡಿ ಆದೇಶ ಹೊರಡಿಸುವಂತೆ ಮೇಲೆ ಓದಲಾದ ಪತ್ರದಲ್ಲಿ ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯರವರು ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಸರ್ಕಾರವು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಕಂಡಂತೆ ಆದೇಶಿಸಿದೆ.

**ಸರ್ಕಾರಿ ಆದೇಶ ಸಂಖ್ಯೆ:ಮಮಇ 208 ಪಿಹೆಚ್ ಪಿ 2020, ಬೆಂಗಳೂರು, ದಿ:16.10.2020**

ಮೇಲೆ ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನಲೆಯಲ್ಲಿ, 2020-21ನೇ ಸಾಲಿನ ಆಯವ್ಯಯ ಭಾಷಣದ ಕಂಡಿಕೆ-134ರಲ್ಲಿ "ಅಂಧ ತಾಯಂದಿರಿಗೆ ಮಾಸಿಕ ರೂ.2000/-ಗಳಂತೆ ಶಿಶುಪಾಲನಾ ಭತ್ಯೆಯನ್ನು ರಾಜ್ಯ ಸರ್ಕಾರವು ಮಗುವಿನ ಮೊದಲ ಎರಡು ವರ್ಷದವರೆಗೆ ನೀಡುತ್ತಿದೆ. ಈ ಭತ್ಯೆಯನ್ನು ಮಕ್ಕಳ ಮೊದಲ ಐದು ವರ್ಷದವರೆಗೆ ನೀಡಲಾಗುವುದು" ಎಂಬ ಘೋಷಣೆಗೆ ಆಡಳಿತಾತ್ಮಕ ಮಂಜೂರಾತಿ ನೀಡಿದೆ ಹಾಗೂ ಸದರಿ ಯೋಜನೆಗೆ ತಗಲುವ ವೆಚ್ಚವನ್ನು ಲೆಕ್ಕಶೀರ್ಷಿಕೆ:2235-02-101-0-99-100 ಸಹಾಯಾನುದಾನದಡಿಯಲ್ಲಿ ಒದಗಿಸಲಾಗಿರುವ ಅನುದಾನದಿಂದ ಭರಿಸಿಕೊಳ್ಳಲು ಹಾಗೂ ಮಾರ್ಗಸೂಚಿಯನ್ವಯ ನಿಯಮಾನುಸಾರವಾಗಿ ಮತ್ತು ಪಾರದರ್ಶಕತೆಯನ್ವಯ ಅನುಷ್ಠಾನಗೊಳಿಸುವ ಷರತ್ತಿಗೊಳಪಟ್ಟು ಅನುಮೋದನೆ ನೀಡಿದೆ.

ಈ ಆದೇಶವನ್ನು ಕ್ರಮವಾಗಿ ಆರ್ಥಿಕ ಇಲಾಖೆಯ ಹಾಗೂ ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಆಇ 317 ವೆಚ್ಚ-10/2020, ದಿ:01.10.2020 ಹಾಗೂ ಪಿಡಿಎಸ್ 30 ಐಎಂಎಂ 2020, ದಿ:14.10.2020ರಲ್ಲಿನ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ

G. H. Sarojamma
(ಜಿ. ಹೆಚ್. ಸರೋಜಮ್ಮ) 16/10/2020
ಸರ್ಕಾರದ ಅಧೀನ ಕಾರ್ಯದರ್ಶಿ-2
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ
ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ

**ಪ್ರತಿಗಳು:**

1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 1.

2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ), ಕರ್ನಾಟಕ, ಹೊಸ ಕಟ್ಟಡ, ಆಡಿಟ್ ಭವನ, ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು- 1.
3. ಪ್ರಧಾನ ಮಹಾಲೇಖಪಾಲರು (ಎ&ಇ), ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ:5329, ಬೆಂಗಳೂರು- 1.
4. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
5. ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ನಿರ್ದೇಶನಾಲಯ, ವಿ.ವಿ.ಗೋಪುರ, ಪೋಡಿಯಂ ಬ್ಲಾಕ್, ಡಾ|| ಅಂಬೇಡ್ಕರ್ ವೀದಿ, ಬೆಂಗಳೂರು-01.
6. ಆಂತರಿಕ ಆರ್ಥಿಕ ಸಲಹೆಗಾರರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಇಲಾಖೆ, ಬೆಂಗಳೂರು.
7. ಮಾನ್ಯ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆಯ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿರವರ ಆಪ್ತ ಕಾರ್ಯದರ್ಶಿ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಜಂಟಿ ಕಾರ್ಯದರ್ಶಿರವರ ಆಪ್ತ ಸಹಾಯಕರು, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬಹುಮಹಡಿಗಳ ಕಟ್ಟಡ, ಬೆಂಗಳೂರು
10. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-10) ವಿಧಾನಸೌಧ, ಬೆಂಗಳೂರು.
11. ಶಾಖಾಧಿಕಾರಿ, ಸ್ವೀಕೃತಿ ಮತ್ತು ರವಾನೆ ಶಾಖೆ, ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಬಹುಮಹಡಿಗಳ ಕಟ್ಟಡ, ಬೆಂಗಳೂರು.
12. ಶಾಖಾ ರಕ್ಷಾ ಕಡತ/ಒ.ಡಿ.ಜಿ.ಸಿ/ಸೂಚನಾ ಫಲಕ/ಹೆಚ್ಚುವರಿ ಪ್ರತಿಗಳು.